ಈ) ಈ ಕಾಮಗಾರಿಯನ್ನು ಕರ್ನಾಟಕ ರಾಜ್ಯ ನಿರ್ಮಾಣ ನಿಗಮಕ್ಕೆ ವಹಿಸಲಾಗಿದೆ. ಸದರಿ ನಿಗಮವನ್ನು ರದ್ದುಪಡಿಸಲು ಸರ್ಕಾರವು ತೀರ್ಮಾನ ತೆಗೆದುಕೊಂಡಿರುವ ಹಿನ್ನೆಲೆಯಲ್ಲಿ ಕಾಮಗಾರಿಯು ಸ್ಥಗಿತಗೊಂಡಿರುತ್ತದೆ. ಕರ್ನಾಟಕ ರಾಜ್ಯ ನಿರ್ಮಾಣ ನಿಗಮದೊಂದಿಗೆ ಗುತ್ತಿಗೆ ಕರಾರನ್ನು ಅಂತಿಮಗೊಳಿಸಿದ ನಂತರ ಮುಂದಿನ ಕ್ರಮ ತೆಗೆದುಕೊಳ್ಳಬೇಕಾಗಿರುವ ಕಾರಣ ಪ್ರಸ್ತುತ ಕಾಲಾವಧಿಯನ್ನು ನಿಗಧಿಪಡಿಸಲು ಸಾಧ್ಯವಿರುವುದಿಲ್ಲ.

ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ರೈತರ ವಿದ್ಯುತ್ ಸಮಸ್ಯೆ

3266 - ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ರೈತರು ವಿದ್ಯುತ್ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಆ ಸಮಸ್ಯೆ ಬಗೆಹರಿಸಲು ಸರ್ಕಾರ ಹಾಕಿಕೊಂಡಿರುವ ಕ್ರಮಗಳೇನು?*

ಆ) *ಬೊಮ್ಮಲಾಪುರ ಗ್ರಾಮದ ಬಳಿ 66:11 ಕೆ.ವಿ ವಿದ್ಯುತ್ ಉಪ ಘಟಕ ಕೆಲಸ ಪ್ರಾರಂಭಿಸಲಾಗಿದೆಯೇ?*

ಇ) *ಹಾಗಿದ್ದಲ್ಲಿ ಎಷ್ಟು ತಿಂಗಳಲ್ಲಿ ಪೂರ್ಣಗೊಳಿಸಲಾಗುವುದು?*

ಶ್ರೀ ವೀರಕುಮಾರ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಹೌದು, ಬಂದಿದೆ.

ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಹಾಲಿ ಬೇಗೂರು, ಗುಂಡ್ಲುಪೇಟೆ ಮತ್ತು ತೆರಕಣಾಂಬಿಯಲ್ಲಿ ವಿದ್ಯುತ್ ಉಪ-ಕೇಂದ್ರಗಳಿರುತ್ತವೆ. ಈ ವಿದ್ಯುತ್ ಉಪ ಕೇಂದ್ರಗಳ ಮೇಲಿನ ಹೊರೆ (ಲೋಡ್) ಸ್ವಲ್ಪಮಟ್ಟಿಗೆ ಅಧಿಕವಾಗಿದ್ದು ಇದರಿಂದ ಗ್ರಾಹಕರಿಗೆ ಒಳ್ಳೆಯ ಗುಣಮಟ್ಟದ ವಿದ್ಯುತ್ ಪೂರೈಕೆ ನೀಡುವಲ್ಲಿ ಸ್ವಲ್ಪ ಅಡಚಣೆಯುಂಟಾಗಿರುತ್ತದೆ. ಈ ಸಮಸ್ಯೆಯನ್ನು ಬಗೆಹರಿಸಲು ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

(1) ಬೊಮ್ಮಲಾಪುರದಲ್ಲಿ ನೂತನ 66:11 ಕೆ.ವಿ. 6.3 ಎಂ.ವಿ.ಎ ಸಾಮರ್ಥ್ಯದ ಒಂದು ವಿದ್ಯುತ್ ಉಪ-ಕೇಂದ್ರವನ್ನು ಸುಮಾರು 315 ಲಕ್ಷ ರೂ. ವೆಚ್ಚದಲ್ಲಿ ಸ್ಥಾಪಿಸುವುದು. ಈ ಕಾಮಗಾರಿಗೆ ನಿಗಮದ ತಾಂತ್ರಿಕ ಸಮಿತಿಯು ಅನುಮೋದನೆ ನೀಡಿರುತ್ತದೆ ಹಾಗೂ ನಿಗಮವು ಈ ಕಾಮಗಾರಿಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ಸಹ ನೀಡಿರುತ್ತದೆ.

(2) ಬೇಗೂರಿನಲ್ಲಿ ಹಾಲಿ ಇರುವ 66:11 ಕೆ.ವಿ. ವಿದ್ಯುತ್ ಉಪಕೇಂದ್ರದಲ್ಲಿರುವ ಒಂದು 6.3 ಎಂ.ವಿ.ಎ ಸಾಮರ್ಥ್ಯದ ಪವರ್ ಟ್ರಾನ್ಸ್‌ಫಾರ್ಮರ್‌ನ್ನು 8 ಎಂ.ವಿ.ಎ ಪವರ್ ಟ್ರಾನ್ಸ್‌ಫಾರ್ಮರ್ ಮೂಲಕ ಬದಲಾಯಿಸಿ ಸದರೀ ವಿದ್ಯುತ್ ಉಪ ಕೇಂದ್ರದ ಸಾಮರ್ಥ್ಯವನ್ನು ಸುಮಾರು 110 ಲಕ್ಷ ರೂ. ವೆಚ್ಚದಲ್ಲಿ ಹೆಚ್ಚಳಗೊಳಿಸಲು ಉದ್ದೇಶಿಸಿದೆ.

(3) ಗುಂಡ್ಲುಪೇಟೆಯಲ್ಲಿ ಹಾಲಿ ಇಡುವ 66:11 ಕೆವಿ ವಿದ್ಯುತ್ ಉಪಕೇಂದ್ರದಲ್ಲಿರುವ 8 ಎಂವಿಎ ಮತ್ತು 6.3 ಎಂವಿಎ ಸಾಮರ್ಥ್ಯದ ಪವರ್ ಟ್ರಾನ್ಸ್‌ಫಾರ್ಮರ್‌ಗಳನ್ನ 12.5 ಎಂವಿಎ ಸಾಮರ್ಥ್ಯದ ಎರಡು ಪವರ್ ಟ್ರಾನ್ಸ್‌ಫಾರ್ಮರ್‌ಗಳ ಮೂಲಕ ಬದಲಾಯಿಸಿ ಸದರೀ ವಿದ್ಯುತ್ ಉಪಕೇಂದ್ರದ ಸಾಮರ್ಥ್ಯವನ್ನೂ ಸಹ ಸುಮಾರು 160 ಲಕ್ಷ ರೂ. ವೆಚ್ಚದಲ್ಲಿ ಹೆಚ್ಚಳಗೊಳಿಸಲು ಉದ್ದೇಶಿಸಿದೆ.

(4) ತೆರಕಣಾಂಬಿಯಲ್ಲಿ ಹಾಲಿ ಇರುವ 33:11 ಕೆ.ವಿ. ವಿದ್ಯುತ್ ಉಪಕೇಂದ್ರದಲ್ಲಿ ಇನ್ನೊಂದು 5 ಎಂ.ವಿ.ಎ ಸಾಮರ್ಥ್ಯದ ಪವರ್ ಟ್ರಾನ್ಸ್‌ಫಾರ್ಮರನ್ನು ಅಳವಡಿಸಿ ಸದರೀ ವಿದ್ಯುತ್ ಉಪಕೇಂದ್ರದ ಸಾಮರ್ಥ್ಯವನ್ನೂ ಸಹ ಸುಮಾರು 73 ಲಕ್ಷ ರೂ. ವೆಚ್ಚದಲ್ಲಿ ಹೆಚ್ಚಳಗೊಳಿಸಲು ಉದ್ದೇಶಿಸಿದೆ.

ಕ್ರಮ ಸಂಖ್ಯೆ (2) ರಿಂದ (4)ರಲ್ಲಿ ತಿಳಿಸಿರುವ ವಿದ್ಯುತ್ ಉಪಕೇಂದ್ರಗಳ ಸಾಮರ್ಥ್ಯ ಹೆಚ್ಚಳಗೊಳಿಸುವ ಕಾರ್ಯಗಳಿಗೆ ಗ್ರಾಮೀಣ ವಿದ್ಯುದೀಕರಣ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆಯ ಬೇಕಾಗಿರುತ್ತದೆ. ನಿಗಮವು ಎದುರಿಸುತ್ತಿರುವ ಕಠಿಣ ಆರ್ಥಿಕ ಪರಿಸ್ಥಿತಿಯಲ್ಲಿ, ನಿಗಮದ ಸ್ವಂತ ಆರ್ಥಿಕ ಸಂಪನ್ಮೂಲಗಳಿಂದ ಈ ಕಾರ್ಯಗಳನ್ನು ನಿರ್ವಹಿಸಲು ಸಾಧ್ಯವಿಲ್ಲ. ಅಲ್ಲದೇ, ಗ್ರಾಮೀಣ ವಿದ್ಯುದೀಕರಣ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆಯಲು ರಾಜ್ಯ ಸರ್ಕಾರದ ಖಾತರಿಯೂ ಬೇಕಾಗಿರುತ್ತದೆ.

ಆ) ಮತ್ತು ಇ) ಬೊಮ್ಮಲಾಪುರದಲ್ಲಿ ಒಂದು ಹೊಸ 66:11 ಕೆ.ವಿ. ವಿದ್ಯುತ್ ಉಪಕೇಂದ್ರದ ನಿರ್ಮಾಣ ಕಾರ್ಯವನ್ನು "ಟರ್ನ್ ಕೀ" ಆಧಾರದ ಮೇಲೆ ನಿರ್ವಹಿಸುವ ಸಲುವಾಗಿ ಟೆಂಡರುಗಳನ್ನು ಕರೆಯಲಾಗಿದ್ದು, ಸ್ವೀಕೃತವಾಗಿರುವ ಟೆಂಡರುಗಳ ಪರಿಶೀಲನೆಯು ಪ್ರಗತಿಯಲ್ಲಿದೆ. ಟೆಂಡರುಗಳು ಇತ್ಯರ್ಥಗೊಂಡ ನಂತರ, ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲು ಸಾಧ್ಯವಾಗುತ್ತದೆ. ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿದ ತರುವಾಯ ಪೂರ್ಣಗೊಳಿಸಲು ಸುಮಾರು 12 ರಿಂದ 15 ತಿಂಗಳ ಕಾಲಾವಧಿಯು ಬೇಕಾಗುತ್ತದೆ.

ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಅಕ್ರಮ ವಿದ್ಯುತ್ ಸರಬರಾಜನ್ನು ಸಕ್ರಮಗೊಳಿಸುವುದು

3267 - ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಎಷ್ಟು ವಿದ್ಯುತ್ ಸಂಪರ್ಕ ನೀಡಲಾಗಿದೆ. ಹಾಗಿದ್ದಲ್ಲಿ ಸಮರ್ಪಕವಾಗಿ ಒದಗಿಸಲಾಗಿದೆಯೇ?

ಆ) ತೆರಕಣಾಂಬಿ 33 : 11 ಉಪ ಕೇಂದ್ರವನ್ನು 66 : 11 ಉಪಕೇಂದ್ರವನ್ನಾಗಿ ಪರಿವರ್ತಿಸಲು ಕ್ರಮ ಕೈಗೊಳ್ಳಲಾಗಿದೆಯೇ?

ಇ) ಹಾಗಿದ್ದಲ್ಲಿ, ಎಷ್ಟು ಅವಧಿಯಲ್ಲಿ ಮಾಡಲಾಗುವುದು?